**ಕರ್ನಾಟಕ ಸರ್ಕಾರ**

ಸಂಖ್ಯೆ:ಪಿಯು/187/ಸಿಬ್ಬಂದಿ/ಸಿಆರ್-3/ಉನೇ/2015-16(ಭಾಗ-3)

ನಿರ್ದೇಶಕರ ಕಚೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560012.
ದಿನಾಂಕ: 19/02/2021.

## ಅಭ್ಯರ್ಥಿಗಳಿಗೆ ಸೂಚನೆ

ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇದ್ದ ಉಪನ್ಯಾಸಕರ ಹುದ್ದೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಗೊಂಡ ಅಭ್ಯರ್ಥಿಗಳಿಗೆ ದಿನಾಂಕ: 11/08/2020 ರಿಂದ ವಿಡಿಯೋ ಕಾನ್ಫರೆನ್ಸ್ ಮೂಲಕ ಸ್ಥಳನಿಯುಕ್ತಿ ಕೌನ್ಸೆಲಿಂಗ್ ನಡೆಸಲಾಯಿತು. ಸದರಿ ಕೌನ್ಸೆಲಿಂಗ್‌ಗೆ ಗೈರುಹಾಜರಾದ ಅಭ್ಯರ್ಥಿಗಳಿಗೆ ದಿನಾಂಕ: 25/02/2021 ರಿಂದ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳ ಕಚೇರಿಯ ಕೆ-ಸ್ವಾನ್ ಕೊಠಡಿಯಲ್ಲಿ ಸ್ಥಳನಿಯುಕ್ತಿ ಕೌನ್ಸೆಲಿಂಗ್ ನಡೆಸಲಾಗುವುದು. ಉಪನ್ಯಾಸಕರ ಖಾಲಿ ಹುದ್ದೆಗಳ ಮಾಹಿತಿಯನ್ನು ಇಲಾಖಾ ವೆಬ್‌ಸೈಟ್ www.pue.kar.nic.in ನ ಈ ಲಿಂಕ್‌ನಲ್ಲಿ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಸ್ಥಳನಿಯುಕ್ತಿ ಕೌನ್ಸೆಲಿಂಗ್ ಸಮಯದಲ್ಲಿ ಈ ಕೆಳಕಂಡ ಸೂಚನೆ ಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ:

1. ಅಭ್ಯರ್ಥಿಗಳು ವೇಳಾಪಟ್ಟಿ ಅನುಸಾರ ನಿಗದಿಪಡಿಸಿದ ಸಮಯ ಹಾಗೂ ಸ್ಥಳದಲ್ಲಿ ಒಂದು ಗಂಟೆ ಮುಂಚಿತವಾಗಿ ಹಾಜರಾಗಿ ಜಿಲ್ಲಾ ಉಪನಿರ್ದೇಶಕರಿಗೆ ವರದಿ ಮಾಡಿಕೊಳ್ಳುವುದು.
2. ಆಯ್ಕೆಗೊಂಡ ಎಲ್ಲಾ ಅರ್ಹ ಅಭ್ಯರ್ಥಿಗಳಿಗೆ (ನೈಜತೆ ಪ್ರಮಾಣ ಪತ್ರ ಸ್ವೀಕೃತವಾದ ಅಥವಾ ಸ್ವೀಕೃತವಾಗದೇ ಇರುವ) ಸ್ಥಳನಿಯುಕ್ತಿ ಕೌನ್ಸೆಲಿಂಗ್ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಲಾಗುವುದು.
3. ಕರ್ನಾಟಕ ಪರೀಕ್ಷಾ ಪ್ರಾಧಿಕಾರದವರು ಪ್ರಕಟಿಸಲಾದ ಅಂತಿಮ ಆಯ್ಕೆ ಪಟ್ಟಿಯಂತೆ ಜೇಷ್ಠತೆಯ ಅನುಸಾರ ಕೌನ್ಸೆಲಿಂಗ್ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಆದ್ಯತೆ ಕಲ್ಪಿಸಲಾಗುವುದು. ಸದರಿ ಜೇಷ್ಠತೆಯನ್ನು ಹೊರತುಪಡಿಸಿ ಯಾವುದೇ ಇತರೆ ಆದ್ಯತೆಗಳಿಗೆ ಅವಕಾಶವಿರುವುದಿಲ್ಲ.
4. ಹಾಜರಾಗುವ ಸಂದರ್ಭದಲ್ಲಿ, ಅಭ್ಯರ್ಥಿಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ದಾಖಲೆ ಪರಿಶೀಲನೆ ವೇಳೆ ನೀಡಲಾಗಿದ್ದ ಸ್ವೀಕೃತಿ ಪತ್ರದ ಪ್ರತಿ ಮತ್ತು ಆಯ್ಕೆಪಟ್ಟಿ ಹಾಗೂ ಗುರುತಿನ ಚೀಟಿಯನ್ನು (ಆಧಾರ್/ಮತದಾರರ ಗುರುತಿನ ಚೀಟಿ)ಹೊಂದಿರತಕ್ಕದ್ದು.
5. ಅಭ್ಯರ್ಥಿಗಳು ರಾಜ್ಯದ ಯಾವುದೇ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕೌನ್ಸೆಲಿಂಗ್ ಪ್ರಕ್ರಿಯೆಗೆ ಹಾಜರಾಗಬಹುದು. **ಆದರೆ, ಯಾವುದೇ ಕಾರಣಕ್ಕೂ ಸ್ಥಳನಿಯುಕ್ತಿ ಕೌನ್ಸೆಲಿಂಗ್ ಪ್ರಕ್ರಿಯೆಗೆ ಕೇಂದ್ರ ಕಚೇರಿಯಲ್ಲಿ ಹಾಜರಾಗತಕ್ಕದ್ದಲ್ಲ.**
6. ಅಭ್ಯರ್ಥಿಗಳು ಕೌನ್ಸೆಲಿಂಗ್ ಪ್ರಕ್ರಿಯೆಗೆ ನಿಗದಿತ ಸ್ಥಳ (ಜಿಲ್ಲಾಧಿಕಾರಿಗಳ ಕಚೇರಿ) ಹಾಗೂ ಸಮಯದಲ್ಲಿ ಕಡ್ಡಾಯವಾಗಿ ಹಾಜರಾಗತಕ್ಕದ್ದು. ಒಂದೊಮ್ಮೆ, ಅಭ್ಯರ್ಥಿಯು ಕೋವಿಡ್-19 ಹಿನ್ನೆಲೆಯಲ್ಲಿ Quarantine/Lock-downಗೆ ಒಳಗಾಗಿದ್ದಲ್ಲಿ, ಸಂಬಂಧಿಸಿದ ಜಿಲ್ಲಾ ಉಪ ನಿರ್ದೇಶಕರಿಗೆ ಅಗತ್ಯ ಲಿಖಿತ ಮಾಹಿತಿ ನೀಡಿದಲ್ಲಿ, ಇಲಾಖಾ ವತಿಯಿಂದ ಸ್ಥಳನಿಯುಕ್ತಿಗಾಗಿ ಮತ್ತೊಂದು ಅವಕಾಶ ಕಲ್ಪಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.
7. ಅಭ್ಯರ್ಥಿಯು ಕೌನ್ಸೆಲಿಂಗ್‌ಗೆ ಹಾಜರಾಗುವ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಕೌನ್ಸೆಲಿಂಗ್ ಕೊಠಡಿ ಹಾಗೂ ಪ್ರಾಂಗಣದಲ್ಲಿ, ಪೋಷಕರನ್ನಾಗಲೀ ಅಥವಾ ಇತರರನ್ನಾಗಲೀ ಕರೆತರತಕ್ಕದ್ದಲ್ಲ.

8. ಸ್ಥಳನಿಯುಕ್ತಿ ಕೌನ್ಸೆಲಿಂಗ್ ಪ್ರಕ್ರಿಯೆಗೆ ಅಭ್ಯರ್ಥಿಯ ಪರವಾಗಿ ಯಾವುದೇ ಕಾರಣಕ್ಕೂ ಬೇರೊಬ್ಬ ವ್ಯಕ್ತಿಗೆ ಹಾಜರಾಗಲು ಅವಕಾಶವಿರುವುದಿಲ್ಲ.
9. ಅಭ್ಯರ್ಥಿಗಳಿಗೆ ಸ್ಥಳನಿಯುಕ್ತಿ ಕೌನ್ಸೆಲಿಂಗ್‌ನಲ್ಲಿ ಪ್ರದೇಶವಾರು (Kalyana Karnataka/Non Kalyana Karnatka) ಜಿಲ್ಲೆಗಳ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ 'ಸಿ' ವಲಯದ ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶವಿರುತ್ತದೆ ('ಸಿ' ವಲಯದಲ್ಲಿ ಲಭ್ಯವಿಲ್ಲದಿದ್ದಲ್ಲಿ 'ಬಿ' ವಲಯ. 'ಬಿ' ವಲಯದಲ್ಲಿ ಖಾಲಿ ಇಲ್ಲದಿದ್ದಲ್ಲಿ 'ಎ' ವಲಯ).
10. ***ಅಭ್ಯರ್ಥಿಗಳ ನೈಜತೆ ಪ್ರಮಾಣ ಪತ್ರಗಳು ಸ್ವೀಕೃತವಾಗುತ್ತಿದ್ದು, ಇಲಾಖಾ ಜಾಲತಾಣದಲ್ಲಿ ಪ್ರಕಟಿಸಲಾಗುವ ಪಟ್ಟಿಯಲ್ಲಿ ಒಂದು ವೇಳೆ "NO" ಎಂದು ನಮೂದಿಸಲಾಗಿದ್ದರೆ, ಅಭ್ಯರ್ಥಿಗಳು ಆತಂಕಗೊಳ್ಳದೆ ತಮ್ಮ ಬಳಿ ಲಭ್ಯವಿರುವ ದಾಖಲೆಯ ಪ್ರತಿಯನ್ನು ಇ-ಮೇಲ್ ವಿಳಾಸ: pu.recruitment2020@gmail.comಕ್ಕೆ ಕಳುಹಿಸಿಕೊಟ್ಟಲ್ಲಿ ಪರಿಶೀಲಿಸಿ, ಸರಿಪಡಿಸ-ಲಾಗುವುದು.***
11. ಸ್ಥಳನಿಯುಕ್ತಿ ಕೌನ್ಸೆಲಿಂಗ್ ಸಂದರ್ಭದಲ್ಲಿ ಇಲಾಖಾ ವತಿಯಿಂದ ನೀಡಲಾಗುವ ಒಪ್ಪಿಗೆ ಪತ್ರವನ್ನು ದ್ವಿಪ್ರತಿಯಲ್ಲಿ ಪಡೆದು, ಆಯ್ಕೆಮಾಡಿಕೊಳ್ಳುವ ಸ್ಥಳವನ್ನು ಭರ್ತಿ ಮಾಡಿ ಜಿಲ್ಲಾ ಉಪನಿರ್ದೇಶಕರಿಂದ ಸಹಿ ಪಡೆದು, ಒಂದು ಸ್ವೀಕೃತಿ ಪ್ರತಿಯನ್ನು ಪಡೆಯತಕ್ಕದ್ದು.
12. ಸ್ಥಳನಿಯುಕ್ತಿ ಕೌನ್ಸೆಲಿಂಗ್ ಸಂದರ್ಭದಲ್ಲಿ ಒಮ್ಮೆ ಆಯ್ಕೆಮಾಡಿಕೊಂಡ ಸ್ಥಳವನ್ನು ಯಾವುದೇ ಕಾರಣಕ್ಕೂ ಬದಲಾಯಿಸಲು ಅವಕಾಶವಿರುವುದಿಲ್ಲ.
13. ಕೋವಿಡ್-19 ಸಾಂಕ್ರಮಿಕ ರೋಗ ನಿಯಂತ್ರಣಕ್ಕಾಗಿ ಸರ್ಕಾರ ಹೊರಡಿಸಿರುವ ಪ್ರಮಾಣಿತ ಕಾರ್ಯಾಚರಣೆ ವಿಧಾನದನ್ವಯ (ಮಾಸ್ಕ್, ಸ್ಯಾನಿಟೈಸರ್, ಸಾಮಾಜಿಕ ಅಂತರ ಕಾಯ್ದುಕೊಳ್ಳುವಿಕೆ ಹಾಗೂ ಇತರೆ) ಕೌನ್ಸೆಲಿಂಗ್ ಪ್ರಕ್ರಿಯೆಗೆ ಹಾಜರಾಗತಕ್ಕದ್ದು.
14. ಇಲಾಖೆಯು ನಿಗದಿಪಡಿಸಿದ ಮಾನದಂಡಗಳನ್ವಯ ಕೌನ್ಸೆಲಿಂಗ್ ಪ್ರಕ್ರಿಯೆಯಲ್ಲಿ ಸ್ಥಳ ಆಯ್ಕೆ ಮಾಡಿಕೊಳ್ಳುವುದು. ಯಾವುದೇ ಕಾರಣಕ್ಕೂ ಅಧಿಕಾರಿಗಳೊಂದಿಗೆ ವಾಗ್ವಾದಕ್ಕೆ ಅವಕಾಶವಿರುವುದಿಲ್ಲ.
15. ಅಭ್ಯರ್ಥಿಗೆ ಸ್ಥಳನಿಯುಕ್ತಿಗೆ ಸಂಬಂಧಿಸಿದ ಯಾವುದೇ ಕುಂದುಕೊರತೆಗಳಿದ್ದಲ್ಲಿ, ಆಯಾ ಜಿಲ್ಲೆಯ ಜಿಲ್ಲಾ ಉಪನಿರ್ದೇಶಕರಿಗೆ ನೇರವಾಗಿ ಸಂಪರ್ಕಿಸಿ ಲಿಖಿತ ಮನವಿಯನ್ನು ಸಲ್ಲಿಸತಕ್ಕದ್ದು. ಯಾವುದೇ ಕಾರಣಕ್ಕೂ ಕೇಂದ್ರ ಕಚೇರಿಗೆ ಖುದ್ದಾಗಿಯಾಗಲೀ ಅಥವಾ ಪರವಾಗಿಯಾಗಲೀ ಸಂಪರ್ಕಿಸಲು ಅವಕಾಶವಿರುವುದಿಲ್ಲ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.